75

**ಕರ್ನಾಟಕ ವಿಧಾನ ಪರಿಷತ್ತು**

**150ನೇ ಅಧಿವೇಶನ-2023**

| ಗಮನ ಸೆಳೆಯುವ ಸೂಚನೆ | |
|---|---|
| ಪ್ರಸ್ತಾಪಿಸಿರುವ ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಹರೀಶ್ ಕುಮಾರ್ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರು |

**ವಿಷಯ:**

ಕರ್ನಾಟಕ ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ವೇತನ ನಿಗದಿ ಹಾಗೂ ಸೇವಾ ಭದ್ರತೆಯನ್ನು ಒದಗಿಸುವ ಕುರಿತು.

**ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಹೇಳಿಕೆ**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಒಟ್ಟು 395 ಹಾಗೂ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಒಟ್ಟು 1301 ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು 2022-23ನೇ ಸಾಲಿನ ಆರ್ಥಿಕ ವರ್ಷದ ಅಂತ್ಯದವರೆಗೆ ತಾತ್ಕಾಲಿಕವಾಗಿ ಪಡೆಯಲು ಸರ್ಕಾರದಿಂದ ಅನುಮತಿ ನೀಡಲಾಗಿರುತ್ತದೆ.

ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಮಾಸಿಕ ಸಂಭಾವನೆಯನ್ನು ಕಾಲ ಕಾಲಕ್ಕೆ ಪರಿಷ್ಕರಿಸಿದ್ದು ಮಾಹಿತಿ ಈ ಕೆಳಗಿನಂತಿರುತ್ತದೆ.

- ಸರ್ಕಾರಿ ಆದೇಶ ಸಂಖ್ಯೆ:ಇಡಿ 14 ಟಿಪಿಇ 95 ದಿನಾಂಕ:17-06-1997 ರಂತೆ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಸಂಭಾವನೆಯನ್ನು ರೂ. 1200.00 ಗೆ ನಿಗದಿಗೊಳಿಸಿ ಮಂಜೂರಾತಿ ನೀಡಲಾಗಿರುತ್ತದೆ.
- ಸರ್ಕಾರಿ ಆದೇಶ ಸಂಖ್ಯೆ:ಇಡಿ 118 ಟಿಪಿಇ 2008 ದಿನಾಂಕ: 13-07-2006 ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಸಂಭಾವನೆಯನ್ನು ರೂ. 1800.00 ಗೆ ನಿಗದಿಗೊಳಿಸಿ ಮಂಜೂರಾತಿ ನೀಡಲಾಗಿರುತ್ತದೆ.
- ಸರ್ಕಾರಿ ಆದೇಶ ಸಂಖ್ಯೆ:ಇಡಿ 236 ಟಿಪಿಇ 2007 ದಿನಾಂಕ:01-12-2008 ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವ ಸರ್ಕಾರಿ ಹಾಗೂ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಸಂಭಾವನೆಯನ್ನು ಪಾಠ

....2

- ಪ್ರವಚನ/ ಪ್ರಯೋಗಾಲಯದ ತರಗತಿಯ ಪ್ರತಿ ಗಂಟೆಗೆ ರೂ.500/- (ಮಾಸಿಕ ಗರಿಷ್ಠ ರೂ.10,000/- ಮೀರದಂತೆ) ಮತ್ತು ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಸಂಭಾವನೆಯನ್ನು ಪಾಠ ಪ್ರವಚನ/ಪ್ರಯೋಗಾಲಯದ ತರಗತಿಯ ಪ್ರತಿ ಗಂಟೆಗೆ ರೂ.350/- (ಮಾಸಿಕ ಗರಿಷ್ಠ ರೂ.7,500/- ಮೀರದಂತೆ) ನಿಗದಿಗೊಳಿಸಿ ಮಂಜೂರಾತಿ ನೀಡಲಾಗಿರುತ್ತದೆ.

- ಸರ್ಕಾರದ ಆದೇಶ ಸಂಖ್ಯೆ:ಇಡಿ 16 ಟಿಪಿಇ 2017, ದಿನಾಂಕ:11.12.2019 ಮತ್ತು ಸರ್ಕಾರದ ಪತ್ರ ಸಂಖ್ಯೆ:ಇಡಿ 174 ಡಿಟಿಇ 2020, ದಿನಾಂಕ:22.12.2020ರಲ್ಲಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅರೆಕಾಲಿಕ ಉಪನ್ಯಾಸಕರು ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆಗೆ ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ. 15000/- ಗಳನ್ನು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿನ ಅರೆಕಾಲಿಕ ಉಪನ್ಯಾಸಕರು ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆಗೆ ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ. 12500/- ಗಳನ್ನು ನಿಗದಿಪಡಿಸಲಾಗಿದ್ದು, ಪ್ರಸ್ತುತ ಜಾರಿಯಲ್ಲಿರುತ್ತದೆ.

ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಶೈಕ್ಷಣಿಕ ಅವಧಿಯು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರು ನಿಗದಿಪಡಿಸುವ ಶೈಕ್ಷಣಿಕ ವೇಳಾಪಟ್ಟಿಯಂತೆ ಹಾಗೂ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಶೈಕ್ಷಣಿಕ ಅವಧಿಯು ತಾಂತ್ರಿಕ ಶಿಕ್ಷಣ ಇಲಾಖೆ ನಿಗದಿಪಡಿಸುವ ಶೈಕ್ಷಣಿಕ ವೇಳಾಪಟ್ಟಿಯಂತೆ ನಡೆಯಲಿದ್ದು, ಆಯಾ ಶೈಕ್ಷಣಿಕ ವೇಳಾ ಪಟ್ಟಿಯಂತೆ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು ಪಡೆಯುತ್ತಿದ್ದು, ಸದರಿ ಅರೆಕಾಲಿಕ ಉಪನ್ಯಾಸಕರುಗಳು ಕಾರ್ಯನಿರ್ವಹಿಸಿದ ಅವಧಿಗೆ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ ಇಡಿ 242 ಡಿಸಿಇ 2021 ದಿನಾಂಕ:14.01.2022ರನ್ವಯ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ಹೆಚ್ಚಿಸಿರುವ ರೀತಿಯಲ್ಲಿ ಗೌರವ ಧನ ಹೆಚ್ಚಿಸಲು ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಕಲ್ಪಿಸಲಾದ ಅವಕಾಶದಂತೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಪ್ರತಿ ಶೈಕ್ಷಣಿಕ ವರ್ಷದಲ್ಲಿ 10 ತಿಂಗಳ ಅವಧಿಗೆ ನೇಮಕ ಮಾಡಿಕೊಳ್ಳುವಂತೆ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರುಗಳ ಬೇಡಿಕೆಗಳ ಹಿನ್ನಲೆಯಲ್ಲಿ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು ದಿನಾಂಕ:08.02.2023ರಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಪ್ರಸ್ತುತ ಪರಿಶೀಲನೆಯಲ್ಲಿರುತ್ತದೆ.

**ಸಂಖ್ಯೆ:ಇಡಿ 64 ಟಿಪಿಇ 2023**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು